**Akashvani : Bangalore**
**Regional Bulletin In Kannada**
**25.08.2025 / 6.40 pm**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**25.08.2025 / 6.40 pm**
**<><*<><>*><>**

**ಮುಖ್ಯಾಂಶಗಳು**

ಮುಖ್ಯಾಂಶಗಳು

೧. ರಾಜ್ಯಾದ್ಯಂತ ದೇವದಾಸಿಯರ ಸಮೀಕ್ಷೆ ನಡೆಸಿ ಪುನರ್ವಸತಿಗೆ ಸರ್ಕಾರ ನಿರ್ಧಾರ

೨. ಧರ್ಮಸ್ಥಳ ಪ್ರಕರಣ ಎನ್ ಐ ಎ ತನಿಖೆಗೆ ನೀಡುವ ಅಗತ್ಯ ಇಲ್ಲ-ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟನೆ

೩. ರಾಷ್ಟ್ರಪತಿ ದ್ರೌಪದಿ ಮುರ್ಮು ಭೇಟಿ ಹಿನ್ನೆಲೆ - ಸೆಪ್ಟೆಂಬರ್ ೧ ಮತ್ತು ೨ ರಂದು ಮೈಸೂರು ಅರಮನೆ ಪ್ರವೇಶ ನಿರ್ಬಂಧ

೪. ತುಂಗಭದ್ರಾ ಜಲಾಶಯದಿಂದ ೧೮೮ ಟಿಎಂಸಿ ನೀರು ಪೋಲು; ಶೀಘ್ರವೇ ಗೇಟ್ ದುರಸ್ತಿಗೊಳಿಸುವಂತೆ ಬಿಜೆಪಿ ಆಗ್ರಹ

೫. ಗೌರಿಗಣೇಶ ಹಬ್ಬದ ಹಿನ್ನೆಲೆ - ಇಂದಿನಿಂದ ಕೆಎಸ್ಆರ್‌ಟಿಸಿಯಿಂದ ೧ ಸಾವಿರದ ೫೦೦ ಹೆಚ್ಚುವರಿ ಬಸ್ ಸೇವೆ

**><><><><><><><><><><**

ರಾಜ್ಯಾದ್ಯಂತ ಬಾಕಿಯಿರುವ ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿ ಕುರಿತು ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದೆಂದು ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ತಿಳಿಸಿದ್ದಾರೆ. ವಿಧಾನಸೌಧದಲ್ಲಿಂದು ನಡೆದ ರಾಜ್ಯ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು ಬ್ಯಾಕ್‌ಲಾಗ್ ಹುದ್ದೆ ಭರ್ತಿ ವಿಷಯದಲ್ಲಿ ರಾಜಿ ಪ್ರಶ್ನೆಯೇ ಇಲ್ಲ. ಸರ್ಕಾರ ಪರಿಶಿಷ್ಟರ ಪರವಾಗಿದ್ದು, ಸೂಕ್ತ ನ್ಯಾಯ ಒದಗಿಸಲು ಅಡ್ಡಗಾಲು ಹಾಕುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ರಾಜ್ಯಾದ್ಯಂತ ದೇವದಾಸಿಯರ ಸಮೀಕ್ಷೆ ಕಾರ್ಯ ಈಗಾಗಲೇ ಆರಂಭಿಸಲಾಗಿದ್ದು, ಸಮೀಕ್ಷೆ ಪೂರ್ಣಗೊಂಡ ಬಳಿಕ ದೇವದಾಸಿಯರ ಪುನರ್ವಸತಿಗೆ ಹಾಗೂ ಈ ಪಿಡುಗನ್ನು ಸಂಪೂರ್ಣವಾಗಿ ತೊಲಗಿಸಲು ಯೋಜನೆ ಜಾರಿಗೊಳಿಸಲಾಗುವುದು ಎಂದು ಭರವಸೆ ನೀಡಿದ್ದಾರೆ. ಇವರಿಗೆ ವಿಶೇಷ ಅನುದಾನ ನೀಡುವ ಬಗ್ಗೆಯೂ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

**><><><><><><><><><><**

ಧರ್ಮಸ್ಥಳ ಪ್ರಕರಣವನ್ನು ಯಾವುದೇ ಕಾರಣಕ್ಕೂ ಎನ್‌ಐಎ ತನಿಖೆಗೆ ನೀಡುವ ಅಗತ್ಯವಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಶೇಷ ತನಿಖಾ ತಂಡ ಸಮರ್ಥ ಹಾಗೂ ಪರಿಣಾಮಕಾರಿಯಾಗಿದೆ ಆಗಿದೆ ಎಂದು ಹೇಳಿದ್ದಾರೆ. ಇದೇ ವೇಳೆ ದೂರುದಾರ ಚಿನ್ನಯ್ಯ ಮಂಪರು ಪರೀಕ್ಷೆ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಪ್ರಕರಣವನ್ನು ನಿರ್ವಹಿಸುವವರು ಅವಶ್ಯಕತೆಗೆ ಅನುಗುಣವಾಗಿ ಮುಂದುವರೆಯಲಿದ್ದಾರೆ ಎಂದು  ಸ್ಪಷ್ಟಪಡಿಸಿದ್ದಾರೆ.

><><><><><><><><><><

ಧರ್ಮಸ್ಥಳ ಪ್ರಕರಣವನ್ನು ಎನ್‌ಐಎ ತನಿಖೆಗೆ ಒಪ್ಪಿಸುವಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸೆಪ್ಟೆಂಬರ್ ೧ರಂದು ಧರ್ಮಸ್ಥಳ ಚಲೋಗೆ ಕರೆ ನೀಡಿರುವುದಾಗಿ  ತಿಳಿಸಿದ್ದಾರೆ.  ಅಂದು ಮಧ್ಯಾಹ್ನ ಧರ್ಮಸ್ಥಳದಲ್ಲಿ ಸಮಾವೇಶ ನಡೆಯಲಿದೆ ಎಂದು ಹೇಳಿದ್ದಾರೆ. ಧರ್ಮಸ್ಥಳದ ವಿರುದ್ಧ ಸಾಮಾಜಿಕ ಜಾಲತಾಣದಲ್ಲಿ ಅಪಪ್ರಚಾರ ನಡೆಯುತ್ತಿರುವುದರಿಂದ ಕೋಟ್ಯಾಂತರ ಭಕ್ತರ ಭಾವನೆಗಳಿಗೆ ಧಕ್ಕೆ ಉಂಟಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

><><><><><><><><><><

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸೆಪ್ಟೆಂಬರ್ ೧ ಮತ್ತು ೨ರಂದು ಮೈಸೂರು ವಾಕ್ ಮತ್ತು ಶ್ರವಣ ಸಂಸ್ಥೆಯ ವಜ್ರ ಮಹೋತ್ಸವದಲ್ಲಿ ಭಾಗವಹಿಸಲಿದ್ದಾರೆ.  ಪ್ರಮೋದಾದೇವಿ ಒಡೆಯರ್ ಅವರ ಆಹ್ವಾನದ ಮೇರೆಗೆ ಸೆಪ್ಟೆಂಬರ್ ೧ ರಂದು ಮೈಸೂರು ಅರಮನೆಗೂ ಭೇಟಿ ನೀಡಲಿದ್ದಾರೆ. ಹೀಗಾಗಿ ಸೆಪ್ಟೆಂಬರ್ ೧ ಹಾಗೂ ೨ರಂದು ಅರಮನೆಗೆ ಸಾರ್ವಜನಿಕರ ಪ್ರವೇಶವನ್ನು ನಿರ್ಬಂಧಿಸಲಾಗಿದೆ. ಈ ಭೇಟಿಯು ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್ ಅವರ ಪತ್ರದ ಮೇರೆಗೆ ನಡೆಯುತ್ತಿರುವುದು ವಿಶೇಷ. ಈ ಹಿನ್ನೆಲೆಯಲ್ಲಿ ಸೆ.೧ ರಿಂದ ಸೆ.೨ರ ಮಧ್ಯಾಹ್ನದವರೆಗೆ ಮೈಸೂರು ಅರಮನೆಗೆ ಪ್ರವಾಸಿಗರ ಪ್ರವೇಶವನ್ನು ನಿಷೇಧಿಸಲಾಗಿದೆ.

><><><><><><><><><><

ತುಂಗಭದ್ರಾ ಜಲಾಶಯದಿಂದ ೧೮೮ ಟಿಎಂಸಿ ನೀರು ಪೋಲಾಗಿದ್ದು ಇದರಿಂದಾಗಿ ರೈತರು ಎರಡನೇ ಬೆಳೆ ಬೆಯಲು ಸಾಧ್ಯವಿಲ್ಲ  ಎಂದು ವಿಧಾನಸಭಾ ವಿರೋಧ ಪಕ್ಷದ ನಾಯಕ ಆರ್.ಅಶೋಕ ತಿಳಿಸಿದ್ದಾರೆ. ವಿಜಯನಗರದಲ್ಲಿಂದು ತುಂಗಭದ್ರಾ ಜಲಾಶಯಕ್ಕೆ ಭೇಟಿ ನೀಡಿ ತುಂಗಭದ್ರಾ ಮಂಡಳಿಯ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದ ಅವರು,  ಸರ್ಕಾರ ಆದಷ್ಟು ಬೇಗ ಗೇಟ್‌ಗಳನ್ನು ದುರಸ್ತಿಗೊಳಿಸುವಂತೆ ಆಗ್ರಹಿಸಿದ್ದಾರೆ. ಕಲ್ಯಾಣ ಕರ್ನಾಟಕ ಭಾಗದ ರೈತರು  ತುಂಗಭದ್ರಾ ಜಲಾಶಯದಿಂದ ಎರಡನೇ ಬೆಳೆಗೆ ತಮಗೆ ನೀರು ಸಿಗುತ್ತಿಲ್ಲ. ಈ ಕುರಿತು ಸದನದಲ್ಲಿ ಚರ್ಚಿಸಲು ಮತ್ತು  ಜಲಾಶಯಕ್ಕೆ ಭೇಟಿ ನೀಡಲು ಮನವಿ ಮಾಡಿದ್ದರು. ಈ ಹಿನ್ನೆಲೆಯಲ್ಲಿ ಇಂದು ಭೇಟಿ ನೀಡಿ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿರುವುದಾಗಿ ತಿಳಿಸಿದ್ದಾರೆ.

><><><><><><><><><><

ರಾಜ್ಯದೆಲ್ಲೆಡೆ ಗೌರಿಗಣೇಶ ಹಬ್ಬದ ಸಂಭ್ರಮ ಮನೆಮಾಡಿದೆ. ಬೆಂಗಳೂರಿನಲ್ಲಿ ಗಣೇಶ ಹಬ್ಬದ ಖರೀದಿ ಜೋರಾಗಿದೆ. ಹೂವು ಹಣ್ಣಿನ ಬೆಲೆ ಗಗನಕ್ಕೇರಿದರೂ ಜನರು ಖರೀದಿಯಲ್ಲಿ ನಿರತರಾಗಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ನಾಳೆ ಸ್ವರ್ಣ ಗೌರಿ ವ್ರತ ಹಾಗೂ ನಾಡಿದ್ದು ಗಣೇಶ ಹಬ್ಬದ ಆಚರಣೆಗೆ ಸಿದ್ಧತೆಗಳು ನಡೆಯುತ್ತಿವೆ. ಮಾರುಕಟ್ಟೆಯಲ್ಲಿ ಗೌರಿ ಹಾಗೂ ಗಣೇಶ ಮೂರ್ತಿಗಳ ಮಾರಾಟ ಭರದಿಂದ ಸಾಗಿತ್ತು. ದೊಡ್ಡಬಳ್ಳಾಪುರ ನಗರಸಭೆಯಿಂದ ಪರಿಸರ ಸ್ನೇಹಿಯಾಗಿ ಗಣೇಶೋತ್ಸವ ಆಚರಿಸುವಂತೆ ಪ್ರಚಾರ ಕೈಗೊಳ್ಳಲಾಗುತ್ತಿದೆ. ಗಣೇಶ ಮೂರ್ತಿಗಳ ವಿಸರ್ಜನೆಗೆ ಕಿರು ಹೊಂಡ ನಿರ್ಮಿಸಿ, ಸೂಕ್ತ ವ್ಯವಸ್ಥೆ ಕಲ್ಪಿಸಲಾಗಿದೆ.

><><><><><><><><><><><

ಗೌರಿ-ಗಣೇಶ ಹಬ್ಬದ ಪ್ರಯುಕ್ತ ಇಂದಿನಿಂದ ಇದೇ ೩೧ರ ವರೆಗೆ ಕೆಎಸ್‌ಆರ್‌ಟಿ ರಾಜ್ಯದ ವಿವಿಧ ಜಿಲ್ಲೆಗಳಿಗೆ ಹಾಗೂ ನೆರೆ ರಾಜ್ಯಗಳಿಗೆ ಒಂದು ಸಾವಿರದ ೫೦೦ಕ್ಕೂ ಹೆಚ್ಚು ಬಸ್‌ಗಳನ್ನು ಓಡಿಸಲು ನಿರ್ಧರಿಸಿದೆ. ಕೆಂಪೇಗೌಡ ಬಸ್ ನಿಲ್ದಾಣ, ಮೈಸೂರು ರಸ್ತೆ ನಿಲ್ದಾಣ, ಶಾಂತಿ ನಗರದಿಂದ ಬಸ್ ಸಂಪರ್ಕ ಕಲ್ಪಿಸಲಾಗಿದೆ. ಮುಂಬೈ, ಪುಣೆ, ಗೋವಾ ಮತ್ತು ಮಂಗಳೂರಿನಿಂದ ಆಗಸ್ಟ್ ೨೭ ರಿಂದ ೩೧ರ ವರೆಗೆ ಹಿಂದಿರುಗುವ ಸೇವೆಯನ್ನು ಕಲ್ಪಿಸಲಾಗಿದೆ.

><><><><><><><><><><><

ಮಂಡ್ಯ ಜಿಲ್ಲೆಯಲ್ಲಿ ೨೦೨೫-೨೬ನೇ ಸಾಲಿನಲ್ಲಿ ೫೦೦೦ ಬೀದಿ ನಾಯಿಗಳಿಗೆ ಸಂತನಾಹರಣ ಚಿಕಿತ್ಸೆ ಮಾಡುವ ಗುರಿ ಹೊಂದಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ. ಮಂಡ್ಯ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬೀದಿ ನಾಯಿಗಳ ಸಂತಾನ ನಿಯಂತ್ರಣ ನೀಡುವ ಸಂಬಂಧ ಅಧಿಕಾರಿಗಳ ಸಭೆ ನಡೆಸಿ ಮಾತನಾಡಿದ ಅವರು, ಮಂಡ್ಯ ಜಿಲ್ಲೆಯಲ್ಲಿ ೨೧ನೇ ಜಾನುವಾರು ಗಣತಿಯನ್ವಯ ೨೪ ಸಾವಿರದ ೬೧೫ ಸಾಕು ನಾಯಿಗಳು ಹಾಗೂ ೫೧ ಸಾವಿರದ ೫೩೧ ಬೀದಿ ನಾಯಿಗಳು ಸೇರಿ ಒಟ್ಟು ೭೬ ಸಾವಿರದ ೧೪೬ ನಾಯಿಗಳಿವೆ ಮಾಹಿತಿ ನೀಡಿದ್ದಾರೆ. ಶಾಲಾ ವಿದ್ಯಾರ್ಥಿಗಳು ಬೀದಿ ನಾಯಿ ಅಥವಾ ನಾಯಿ ಕಡಿತಕ್ಕೆ ಒಳಗಾದರೆ ಹತ್ತಿರದ ವೈದ್ಯರನ್ನು ಸಂಪರ್ಕಿಸಿ ಚಿಕಿತ್ಸೆ ಪಡೆದುಕೊಳ್ಳ ಬೇಕು ಎಂದು ಜಾಗೃತಿ ಮೂಡಿಸುವಂತೆ ಸೂಚಿಸಿದ್ದಾರೆ.

><><><><><><><><><><><

ರಾಜ್ಯಾದ್ಯಂತ ನೈರುತ್ಯ ಮಾನ್ಸೂನ್ ದುರ್ಬಲವಾಗಿತ್ತು.  ಕರಾವಳಿ ಕರ್ನಾಟಕದ ಹಲವೆಡೆ ಮತ್ತು ಒಳನಾಡಿನ ಕೆಲವು ಸ್ಥಳಗಳಲ್ಲಿ ಮಳೆಯಾಗಿದೆ. ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಹಲವೆಡೆ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಬಂಗಾಳಕೊಲ್ಲಿಯಲ್ಲಿ ಉಂಟಾಗಿರುವ ವಾಯುಭಾರ ಕುಸಿತದ ಹಿನ್ನೆಲೆಯಲ್ಲಿ ನಾಳೆಯಿಂದ ಆಗಸ್ಟ್ ೩೧ ರವರೆಗೆ ಕರಾವಳಿ ಉತ್ತರ ಒಳನಾಡು, ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ವ್ಯಾಪಕ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಡಾ.ಸಿ.ಎಸ್.ಪಾಟೀಲ್ ಎಚ್ಚರಿಕೆ ನೀಡಿದ್ದಾರೆ.

**ಧ್ವನಿ : ಡಾ.ಸಿ.ಎಸ್.ಪಾಟೀಲ್, ಹವಾಮಾನ ಇಲಾಖೆ ನಿರ್ದೇಶಕ (  30 ಸೆಕೆಂಡುಗಳು)**

><><><><><><><><><><><

ಅರಣ್ಯ ಇಲಾಖೆಯ ಅಧಿಕಾರಿ-ಸಿಬ್ಬಂದಿ ತಮ್ಮ ಕರ್ತವ್ಯದೊಂದಿಗೆ ಸಾಂಸ್ಕೃತಿಕ ಹಾಗೂ ಕ್ರೀಡೆಗಳಲ್ಲಿ ಭಾಗವಹಿಸುವುದು ಅಗತ್ಯವಾಗಿದೆ ಎಂದು ನಿವೃತ್ತ ಐಎಎಸ್ ಅಧಿಕಾರಿ ಅಶೋಕ ದಳವಾಯಿ ಅಭಿಪ್ರಾಯ ಪಟ್ಟಿದ್ದಾರೆ.  ವಿಜಯಪುರದಲ್ಲಿ ಜರುಗಿದ ಬೆಳಗಾವಿ ವೃತ್ತ ಮಟ್ಟದ ಅರಣ್ಯ ಕ್ರೀಡಾಕೂಟಕ್ಕೆ ಚಾಲನೆ ನೀಡಿ, ಮಾತನಾಡಿದ ಅವರು, ದೈಹಿಕ ಹಾಗೂ ಮಾನಸಿಕ ಸದೃಢತೆಗೆ ಕ್ರೀಡೆಗಳು ಸಹಕಾರಿಯಾಗಿದೆ ಎಂದು ತಿಳಿಸಿದ್ದಾರೆ. ಸಾರ್ವಜನಿಕರು ಗಿಡ-ಮರಗಳನ್ನು ಪೋಷಿಸಿ ಸಂರಕ್ಷಣೆ ಮಾಡುವ ಮೂಲಕ ಸ್ವಚ್ಛ ಹಾಗೂ ಸುಂದರ ಪರಿಸರ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಕರೆ ನೀಡಿದ್ದಾರೆ.

><><><><><><><><><><><

ಉಡುಪಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಂಯುಕ್ತ ಆಶ್ರಯದಲ್ಲಿ ಸರಕಾರಿ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ಮಕ್ಕಳ ಹೃದ್ರೋಗ ಉಚಿತ ತಪಾಸಣಾ ಶಿಬಿರ ಕಾರ್ಯಕ್ರಮ ನಡೆಯಿತು. ಒಟ್ಟು ೬೦ ಫಲಾನುಭವಿಗಳು ಶಿಬಿರದ ಪ್ರಯೋಜನ ಪಡೆದುಕೊಂಡರು. ಶಿಬಿರದಲ್ಲಿ ಮಂಗಳೂರು ಎ.ಜೆ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ಮಕ್ಕಳ ಹೃದ್ರೋಗ ತಜ್ಞರಾದ ಡಾ.ಪ್ರೇಮ ಆಳ್ವ ಹಾಗೂ ಡಾ.ನಿಕಿಲ್ ಸ್ವಪ್ನಿಲ್, ಸೇರಿದಂತೆ ಹಲವು ತಜ್ಞರು ಉಪಸ್ಥಿತರಿದ್ದರು.

><><><><><><><><><><><

ಮನುಕುಲದ ಒಳಿತಿಗಾಗಿ ಆಚರಿಸುವ ಹಬ್ಬ ಹರಿದಿನಗಳನ್ನು ವಾತಾವರಣಕ್ಕೆ ಮಾರಕವಾಗುವ ರೀತಿಯಲ್ಲಿ ಆಚರಿಸದೇ ಪರಿಸರಸ್ನೇಹಿಯಾಗಿ ಆಚರಿಸುವ ಪರಿಪಾಠ ಬೆಳೆಸಿಕೊಳ್ಳಬೇಕು ಎಂದು ಯಾದಗಿರಿ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಹೇಳಿದರು.

><><><><><><><><><><><